**PCR 248-2026**

**ದಿ: 07.07.2026 ರಂದು ಸತ್ಯ ಪ್ರತಿಜ್ಞೆ ಮೇಲೆ ಪ್ರಮಾಣ ವಚನ ಬೋಧಿಸಲಾಯಿತು.**

ಈ ದಿನ ನಾನು ನ್ಯಾಯಾಲಯಕ್ಕೆ ನನ್ನ ಪ್ರಮಾಣಿಕೃತ ಹೇಳಿಕೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ ಮತ್ತು ಸದರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ದಿ:20.02.2026 ರಂದು ಆರೋಪಿಯು ನೀಡಿದ ಹೆಚ್.ಡಿ.ಎಫ್.ಸಿ. ಬ್ಯಾಂಕ್, ಹೊಸಕೋಟೆ ಶಾಖೆಯ ಚೆಕ್ ಸಂಖ್ಯೆ 000229ನ್ನು ಹಾಜರುಪಡಿಸಿದ್ದು ನಿಪಿ.1 ಎಂದು, ದಿಃ06.05.2026 ರಂದು ನಿಪಿ.1 ಮಾನ್ಯಗೊಳ್ಳದ ಕುರಿತು ಕರ್ನಾಟಕ ಬ್ಯಾಂಕ್, ಹೊಸಕೋಟೆ ಶಾಖೆಯವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು ನಿಪಿ.2 ಎಂದು, ದಿ:20.05.2026 ರಂದು ವಕೀಲರ ಮೂಲಕ ಆರೋಪಿಗೆ ನೀಡಿದ ನೋಟಿಸ್ಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ.3 ಎಂದು, ನಿಪಿ.3 ಆರೋಪಿಗೆ ಕಳುಹಿಸಿದ ಕುರಿತು ಅಂಚೆ ರಸೀದಿಯನ್ನು ಹಾಜರುಪಡಿಸಿದ್ದು ನಿಪಿ.4 ಎಂದು, ನಿಪಿ.3 ಆರೋಪಿಗೆ ಜಾರಿಯಾದ ಕುರಿತು ಅಂಚೆ ಹಿಂಬರಹವನ್ನು ಹಾಜರುಪಡಿಸಿದ್ದು ನಿಪಿ.5 ಎಂದು ಗುರುತಿಸಲಾಯಿತು. ಆದ್ದರಿಂದ ಫಿರ್ಯಾದನ್ನು ಪರಿಗಣಿಸಿ ಆರೋಪಿಯ ವಿರುದ್ದ ಕಲಂ 138 ಎನ್.ಐ ಆಕ್ಟ್ ಅಡಿಯಲ್ಲಿ ಸೂಕ್ತ ಕ್ರಮ ಜರುಗಿಸಲು ವಿನಂತಿ ಇದೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ.ಸ.ಇದೆ.

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ಹೊಸಕೋಟೆ.